# All India Radio: Bangalore
# Regional Bulletin In Kannada
# 03.04.2025 / 6.40 p.m.
**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

ಮುಖ್ಯಾಂಶಗಳು

೧. ರಾಜ್ಯದಲ್ಲಿ ಗಿಗ್ ಕಾರ್ಮಿಕರ ಕಲ್ಯಾಣ ಮಂಡಳಿ ಸ್ಥಾಪಿಸಲು ಸರ್ಕಾರ ನಿರ್ಧಾರ

೨. ಮೇಕೆದಾಟು, ಭದ್ರಾ ಮೇಲ್ದಂಡೆ ಯೋಜನೆಗೆ ಶೀಘ್ರವೇ ಅನುದಾನ ಬಿಡುಗಡೆ ಮಾಡುವಂತೆ ಕೇಂದ್ರ ಸರ್ಕಾರಕ್ಕೆ ಮುಖ್ಯಮಂತ್ರಿ ಸಿದ್ದರಾಮಯ್ಯ ಮನವಿ

೩. ವಕ್ಫ್ ತಿದ್ದುಪಡಿ ವಿಧೇಯಕ ಸ್ವಾಗತಿಸಿದ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ

೪. ಮಳೆಗಾಲ ಆರಂಭಕ್ಕೂ ಮುನ್ನ ಬೆಂಗಳೂರಿನಲ್ಲಿ ರಾಜಕಾಲುವೆಗಳ ಹೂಳೆತ್ತಲು ಮುಖ್ಯ ಆಯುಕ್ತರ ಸೂಚನೆ

೫. ರಾಜ್ಯದ ಹಲವೆಡೆ ಮುಂದಿನ ಎರಡು ದಿನಗಳ ಕಾಲ ಭಾರೀ ಮಳೆಯಾಗುವ ಸಂಭವ - ಹವಾಮಾನ ಇಲಾಖೆ ಮುನ್ಸೂಚನೆ

*****************

ರಾಜ್ಯದಲ್ಲಿ ಗಿಗ್ ಕಾರ್ಮಿಕರ ಕಲ್ಯಾಣ ಮಂಡಳಿ ರಚಿಸಲು ಮುಖ್ಯಮಂತ್ರಿ ಸಿದ್ದರಾಮಯ್ಯ ನೇತೃತ್ವದ ಸಭೆಯಲ್ಲಿ ತೀರ್ಮಾನಿಸಲಾಗಿದೆ. ಇದಕ್ಕಾಗಿ ಸಂಬಂಧಿತ ಸಂಸ್ಥೆಗಳಿಂದ ಶೇಕಡ ೫ ರಷ್ಟು ಸೆಸ್ ಸಂಗ್ರಹಿಸಲು ಇಂದು ನವದೆಹಲಿಯಲ್ಲಿ ನಡೆದ ಸಭೆ ತಿರ್ಮಾನಿಸಿದೆ. ಅಗತ್ಯ ಹೆಚ್ಚುವರಿ ಹಣವನ್ನು ಸರ್ಕಾರವೇ ಭರಿಸಿ ಗಿಗ್ ಕಾರ್ಮಿಕರ ಕಲ್ಯಾಣಕ್ಕೆ ಯೋಜನೆಗಳನ್ನು ರೂಪಿಸಲು ತೀರ್ಮಾನಿಸಲಾಗಿದೆ.

ಅಮೆಜಾನ್, ಫ್ಲಿಪ್ ಕಾರ್ಟ್ ಸೇರಿದಂತೆ ಹತ್ತಾರು ಸಂಸ್ಥೆಗಳಲ್ಲಿ ಕಾರ್ಯ ನಿರ್ವಹಿಸುವ ಕಾರ್ಮಿಕರ ಕಲ್ಯಾಣಕ್ಕಾಗಿ ರಾಜ್ಯ ಸರ್ಕಾರ ಮುಂದಾಗಿದೆ. ಗಿಗ್ ಕಾರ್ಮಿಕರ ಕಲ್ಯಾಣ ಕಾರ್ಯಕ್ರಮ ರೂಪಿಸುವುದಾಗಿ ಭಾರತ್ ಜೋಡೋ ಯಾತ್ರೆ ಸಂದರ್ಭದಲ್ಲಿ ರಾಹುಲ್ ಗಾಂಧಿ ಭರವಸೆ ನೀಡಿದ್ದರು.

ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ನಿವಾಸದಲ್ಲಿ ನಡೆದ ಸಭೆಯಲ್ಲಿ ಸಚಿವರಾದ ಸಂತೋಷ್ ಲಾಡ್, ಪ್ರಿಯಾಂಕ್ ಖರ್ಗೆ, ಎಂ.ಬಿ.ಪಾಟೀಲ್ ಉಪಸ್ಥಿತರಿದ್ದರು.

*****************

ಮುಖ್ಯಮಂತ್ರಿ ಸಿದ್ದರಾಮಯ್ಯ ನವದೆಹಲಿಯಲ್ಲಿಂದು ಕೇಂದ್ರ ಜಲಶಕ್ತಿ ಸಚಿವ ಸಿ.ಆರ್.ಪಾಟೀಲ್ ಅವರನ್ನು ಭೇಟಿ ಮಾಡಿ ರಾಜ್ಯದಲ್ಲಿ ನೆನೆಗುದಿಗೆ ಬಿದ್ದಿರುವ ನೀರಾವರಿ ಯೋಜನೆಗಳಿಗೆ ಅನುಮತಿ ನೀಡುವಂತೆ ಮನವಿ ಮಾಡಿದ್ದಾರೆ.

ಕರ್ನಾಟಕ ಸರ್ಕಾರ ಈಗಾಗಲೇ ರವಾನಿಸಿರುವ ಪ್ರಸ್ತಾವನೆಗಳ ಪೈಕಿ ಮೇಕೆದಾಟು, ಭದ್ರಾ ಮೇಲ್ದಂಡೆ ಯೋಜನೆಗಳು ಬಾಕಿ ಉಳಿದಿವೆ. ಕೇಂದ್ರ ಸಚಿವರು ಮಧ್ಯಪ್ರವೇಶಿಸಿ ಇವುಗಳಿಗೆ ಅನುಮೋದನೆ ದೊರಕಿಸುವಂತೆ ಮನವಿ ಮಾಡಿದ್ದಾರೆ. ಮೇಕೆದಾಟು ಯೋಜನೆಯಿಂದ ಕರ್ನಾಟಕ ಹಾಗೂ ತಮಿಳುನಾಡು ಎರಡೂ ರಾಜ್ಯಗಳಿಗೂ ಅನುಕೂಲವಾಗಲಿದೆ ಎಂದು ಪ್ರತಿಪಾದಿಸಿದ್ದಾರೆ.

ಭದ್ರಾ ಮೇಲ್ದಂಡೆ ಯೋಜನೆಗೆ ಈ ಹಿಂದೆ ೨೦೨೩-೨೪ನೇ ಸಾಲಿನ ಆಯವ್ಯಯದಲ್ಲಿ ಘೋಷಿಸಿದಂತೆ ೫೩೦೦ ಕೋಟಿ ರೂಪಾಯಿಗಳ ಅನುದಾನವನ್ನು ಶೀಘ್ರವೇ ಬಿಡುಗಡೆ ಮಾಡಬೇಕು. ಕಳಸಾ ಬಂಡೂರಿ ನಾಲಾ ಯೋಜನೆಗೆ ರಾಷ್ಟ್ರೀಯ ವನ್ಯಜೀವಿ ಮಂಡಳಿ ವತಿಯಿಂದ ಅಗತ್ಯ ಪೂರ್ವಾನುಮತಿ ಕೊಡಿಸಬೇಕು ಎಂದು ಮನವಿ ಮಾಡಿದ್ದಾರೆ. ಪ್ರಮುಖವಾಗಿ ಗೋದಾವರಿ-ಕಾವೇರಿ ನದಿ ಜೋಡಣೆ, ಬೇಡ್ತಿ-ವರದಾ ನದಿ ಜೋಡಣೆ ಯೋಜನೆಯಲ್ಲಿ ಕರ್ನಾಟಕಕ್ಕೆ ಹೆಚ್ಚಿನ ನೀರು ದೊರೆಯುವಂತೆ ಕಾಳಜಿ ವಹಿಸಬೇಕು ಎಂದು ಪತ್ರದಲ್ಲಿ ಉಲ್ಲೇಖಿಸಿದ್ದಾರೆ.

*****************

ವಕ್ಫ್ ವ್ಯವಹಾರದಲ್ಲಿ ಯಾವುದೇ ಮುಸ್ಲಿಮೇತರರು ಹಸ್ತಕ್ಷೇಪ ಮಾಡುವಂತಿಲ್ಲ ಎಂದು ಕೇಂದ್ರ ಅಲ್ಪಸಂಖ್ಯಾತ ವ್ಯವಹಾರಗಳ ಸಚಿವ ಕಿರಣ್ ರಿಜಿಜು ತಿಳಿಸಿದ್ದಾರೆ. ರಾಜ್ಯ ಸಭೆಯಲ್ಲಿ ಮಸೂದೆ ಮಂಡಿಸಿ ಮಾತನಾಡಿದ ಅವರು ಅದರ ನಿರ್ವಹಣೆ ಮತ್ತು ಫಲಾನುಭವಿಗಳು ಮುಸ್ಲಿಮರು ಮಾತ್ರ ಎಂದು ಸ್ಪಷ್ಟಪಡಿಸಿದ್ದಾರೆ. ಲೋಕಸಭೆಯಲ್ಲಿ ನಿನ್ನೆ ಅನುಮೋದನೆಗೊಂಡ ವಕ್ಫ್ ತಿದ್ದುಪಡಿ ವಿಧೇಯಕ ೨೦೨೫ ಅನ್ನು ದಕ್ಷಿಣ ಕನ್ನಡ ಜಿಲ್ಲಾ ಬಿಜೆಪಿ ವಕ್ತಾರ ಅರುಣ್ ಜಿ.ಶೇಟ್ ಸ್ವಾಗತಿಸಿದ್ದಾರೆ.

ಧ್ವನಿ: ಅರುಣ್ ಜಿ.ಶೇಟ್

*****************

ವಕ್ಫ್ ತಿದ್ದುಪಡಿ ಮಸೂದೆಗೆ ಲೋಕಸಭೆ ಅನುಮೋದನೆ ನೀಡಿರುವುದನ್ನು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಸ್ವಾಗತಿಸಿದ್ದಾರೆ. ವಕ್ಫ್ ಮಂಡಳಿಯ ಹೆಸರಿನಲ್ಲಿ ಕಾಂಗ್ರೆಸ್ ನಾಯಕರು ರಾಜ್ಯದಲ್ಲಿ ಭೂಮಿಯನ್ನು ಲೂಟಿ ಮಾಡುತ್ತಿದ್ದಾರೆ ಎಂದು ಆರೋಪಿಸಿದ್ದಾರೆ. ರಾಜ್ಯದಲ್ಲಿ, ದೇವಾಲಯಗಳಿಗೆ ಸೇರಿದ ಭೂಮಿ, ಸಾವಿರ ವರ್ಷಗಳ ಇತಿಹಾಸ ಹೊಂದಿರುವ ಧಾರ್ಮಿಕ ಸಂಸ್ಥೆಗಳು ಮತ್ತು ರೈತರ ಒಡೆತನದ ಲಕ್ಷಾಂತರ ಎಕರೆ ಕೃಷಿಭೂಮಿಯನ್ನು ವಕ್ಫ್ ಮಂಡಳಿಯ ಹೆಸರಿನಲ್ಲಿ ವಶಪಡಿಸಿಕೊಳ್ಳಲಾಗಿದೆ ಎಂದು ವಿಜಯೇಂದ್ರ ಆರೋಪಿಸಿದ್ದಾರೆ.

*****************

ಸರ್ಕಾರದ ಬೆಲೆ ಏರಿಕೆ ನೀತಿ ವಿರುದ್ಧ ಬಿಜೆಪಿ ಹೋರಾಟವನ್ನು ತಾರ್ಕಿಕ ಅಂತ್ಯಕ್ಕೆ ಕೊಂಡೊಯ್ಯಲಿದೆ ಎಂದು ಪ್ರತಿಪಕ್ಷ ನಾಯಕ ಆರ್.ಅಶೋಕ ಸ್ಪಷ್ಟಪಡಿಸಿದ್ದಾರೆ.

ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕಾಂಗ್ರೆಸ್‌ಗೆ ಮತ ಹಾಕಿದ ಜನರು ಈಗ ಪಶ್ಚಾತಾಪ ಪಡುತ್ತಿದ್ದಾರೆ ಎಂದು ಹೇಳಿದ್ದಾರೆ.

*****************

ಹಾಲಿನ ದರ ಹೆಚ್ಚಳ ಮಾಡಿರುವುದರಿಂದ ರೈತರಿಗೆ ಹೆಚ್ಚು ಅನುಕೂಲವಾಗಲಿದೆ ಎಂದು ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ತಿಳಿಸಿದ್ದಾರೆ. ನವದೆಹಲಿಯಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ರಾಜ್ಯದಲ್ಲಿ ಟೋಲ್ ದರ ಹೆಚ್ಚಳವಾಗಿದ್ದು ಬಿಜೆಪಿ ನಾಯಕರು ಯಾಕೆ ಪ್ರತಿಭಟನೆ ನಡೆಸುತ್ತಿಲ್ಲ ಎಂದು ಪ್ರಶ್ನಿಸಿದ್ದಾರೆ. ಗ್ಯಾರಂಟಿ ವೆಚ್ಚ ಹೊರೆಯಾಗುತ್ತಿರುವ ಕಾರಣಕ್ಕೆ ಬೆಲೆ ಹೆಚ್ಚಳ ಮಾಡಲಾಗಿದೆ ಎಂಬ ಪ್ರತಿ ಪಕ್ಷ ಬಿಜೆಪಿ ಆರೋಪವನ್ನು ಅವರು ತಳ್ಳಿ ಹಾಕಿದ್ದಾರೆ. ಬೇರೆ ರಾಜ್ಯಗಳಿಗೆ ಹೋಲಿಸಿದರೆ ರಾಜ್ಯದಲ್ಲಿ ಹಾಲಿನ ದರ ಕಡಿಮೆಯಿದೆ" ಎಂದು ಬೆಲೆ ಏರಿಕೆಯನ್ನು ಡಿ.ಕೆ.ಶಿವಕುಮಾರ್ ಸಮರ್ಥಿಸಿಕೊಂಡಿದ್ದಾರೆ.

*****************

ಬಿಬಿಎಂಪಿ ವ್ಯಾಪ್ತಿಯಲ್ಲಿ ಮುಂಗಾರು ಮಳೆ ಸಂದರ್ಭದಲ್ಲಿ ಯಾವುದೇ ರೀತಿಯ ಸಮಸ್ಯೆಯಾಗದಂತೆ ಮುಂಜಾಗ್ರತಾ ಕ್ರಮವಹಿಸುವಂತೆ ಮುಖ್ಯ ಆಯುಕ್ತ ತುಷಾರ್ ಗಿರಿನಾಥ್ ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ. ಬೆಂಗಳೂರಿನಲ್ಲಿ ಮುಂಗಾರು ಮಳೆಯಿಂದ ಉಂಟಾಗುವ ಸಮಸ್ಯೆಗಳನ್ನು ತಪ್ಪಿಸುವ ಸಲುವಾಗಿ ಇಂದು ಪಾಲಿಕೆ ಕೇಂದ್ರ ಕಛೇರಿಯ ನೌಕರರ ಸಭಾಂಗಣದಲ್ಲಿ ನಡೆದ ಸಭೆಯಲ್ಲಿ ಮಾತನಾಡಿದ ಅವರು, ಅಧಿಕಾರಿಗಳು ವಿಪತ್ತು ನಿರ್ವಹಣೆ ಕಾಯ್ದೆಯಡಿ ಅಗತ್ಯ ಕ್ರಮಗಳನ್ನು ತೆಗೆದುಕೊಳ್ಳುವಂತೆ ಅವರು, ನಿರ್ದೇಶನ ನೀಡಿದ್ದಾರೆ. ಸಾಯಿ ಲೇಔಟ್, ಪೈ ಲೇಔಟ್, ಕೇಂದ್ರೀಯ ವಿಹಾರ್ ಅಪಾರ್ಟ್ಮೆಂಟ್, ಕೋಗಿಲು ಕ್ರಾಸ್, ಸರ್ಜಾಪುರ ರಸ್ತೆ, ಅಬ್ಬಿಗೆರೆ ಕೆರೆ ಕೋಡಿ, ಮೈಸೂರು ರಸ್ತೆ, ಗಾಳಿ ಆಂಜನೇಯ ಸ್ವಾಮಿ ದೇವಸ್ಥಾನ ಸೇರಿದಂತೆ ಇನ್ನಿತರೆ ಸ್ಥಳಗಳಲ್ಲಿ ಮಳೆಗಾಲ ಪ್ರಾರಂಭಕ್ಕೂ ಮುನ್ನ ಕಾಮಗಾರಿಗಳನ್ನು ಪೂರ್ಣಗೊಳಿಸಲು ಸೂಚಿಸಿದ್ದಾರೆ. ರಾಜಕಾಲುವೆಗಳಲ್ಲಿ ಹೂಳೆತ್ತುವುದು, ಮರಗಳ ರೆಂಬೆ-ಕೊಂಬೆ ತೆರವಿಗೆ ಕ್ರಮವಹಿಸುವಂತೆ ಮುಖ್ಯ ಆಯುಕ್ತರು ಸೂಚಿಸಿದ್ದಾರೆ.

*****************

ಬೆಂಗಳೂರು, ಗದಗ ಸೇರಿದಂತೆ ರಾಜ್ಯದ ವಿವಿಧೆಡೆ ಇಂದು ಮಳೆಯಾಗಿರುವ ವರದಿಯಾಗಿದೆ. ಬಿಸಿಲಿನ ಬೇಗೆಯಿಂದ ತತ್ತರಿಸಿದ್ದ ರಾಜಧಾನಿ ಬೆಂಗಳೂರಿನಲ್ಲಿ ವರುಣ ತಂಪೆರೆದಿದ್ದಾನೆ. ಇಂದು ಮತ್ತು ನಾಳೆ ಬೆಂಗಳೂರಿನಲ್ಲಿ ಮಳೆಯಾಗುವ ಸಾಧ್ಯತೆಯಿದೆ ಎಂದು ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ. ಬೆಳಗಾವಿ, ಧಾರವಾಡ, ಹಾವೇರಿ, ಕೊಪ್ಪಳ, ಗದಗ ಹಾಗೂ ಕರಾವಳಿ ಜಿಲ್ಲೆಗಳಲ್ಲಿ ಇಂದು ಹಾಗೂ ಮುಂದಿನ ಎರಡು ದಿನ ಗುಡುಗು ಸಹಿತ ಭಾರೀ ಮಳೆಯಾಗುವ ಸಾಧ್ಯತೆಯಿದೆ ಇದೆ ಎಂದು ಭಾರತೀಯ ಹವಾಮಾನ ಇಲಾಖೆ ನಿರ್ದೇಶಕ ಸಿ.ಎಸ್. ಪಾಟೀಲ್ ಮಾಹಿತಿ ನೀಡಿದ್ದಾರೆ.

ಧ್ವನಿ: ಸಿ.ಎಸ್.ಪಾಟೀಲ್

*****************

ತಂತ್ರಜ್ಞಾನದ ಸಕಾರಾತ್ಮಕ ಮತ್ತು ನಕಾರಾತ್ಮಕ ಪರಿಣಾಮಗಳು ಮತ್ತು ಶಿಕ್ಷಣ ಉದ್ಯಮವಾಗುತ್ತಿರುವುದರ ಬಗ್ಗೆ ಗಂಭೀರ ಚರ್ಚೆ ಅಗತ್ಯವಿದೆ ಎಂದು ಪ್ರೊಫೆಸರ ಬರಗೂರು ರಾಮಚಂದ್ರಪ್ಪ ತಿಳಿಸಿದ್ದಾರೆ.

ಬೆಳಗಾವಿಯ ಸರ್ಕಾರಿ ಸಂಗೊಳ್ಳಿ ರಾಯಣ್ಣ ಪ್ರಥಮ ದರ್ಜೆ ಕಾಲೇಜಿನಲ್ಲಿ ಆಯೋಜಿಸಲಾದ ಹೊಸ ಸಹಸ್ರಮಾನದ ಧ್ವನಿಗಳು: ಸಮಕಾಲೀನ ಭಾರತದಲ್ಲಿ ಸಾಹಿತ್ಯ, ಸಮಾಜ ಮತ್ತು ಸಂಸ್ಕೃತಿ' ವಿಷಯ ಕುರಿತಾದ ರಾಷ್ಟ್ರಮಟ್ಟದ ವಿಚಾರ ಸಂಕಿರಣಕ್ಕೆ ಚಾಲನೆ ನೀಡಿ, ಅವರು ಮಾತನಾಡಿದರು. ಪ್ರಸ್ತುತ ಜಾಗತಿಕರಣದ ಆರ್ಥಿಕ ನೀತಿಯಿಂದಾಗಿ ಜಾತಿ, ವರ್ಗ ಹಾಗೂ ಭಾವನಾತ್ಮಕ ಸಂಗತಿಗಳು ಪ್ರಾಧ್ಯಾನ್ಯತೆ ಪಡೆದುಕೊಂಡಿವೆ ಎಂದು ಕಳವಳ ವ್ಯಕ್ತಪಡಿಸಿದ್ದಾರೆ.

*****************

ಸಂಕ್ಷಿಪ್ತ ಸುದ್ದಿಗಳು

೧. ಸಾಮಾಜಿಕ ಜಾಲತಾಣಗಳಲ್ಲಿ ಹೆಚ್ಚು ಗಮನ ಸೆಳೆಯುತ್ತಿರುವ ಜನಪ್ರಿಯ ಘಿಬ್ಲಿ ಫೋಟೋ ಟ್ರೆಂಡ್ ಬಗ್ಗೆ ಜಿಲ್ಲೆಯ ಸಾರ್ವಜನಿಕರು ಎಚ್ಚರದಿಂದ ಇರಬೇಕು ಎಂದು ಚಿಕ್ಕಬಳ್ಳಾಪುರ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಕುಶಲ್ ಚೌಕ್ಸೆ ಮನವಿ ಮಾಡಿದ್ದಾರೆ.

೨. ಗದಗ ೧೨೨ ಗ್ರಾಮ ಪಂಚಾಯತಿಗಳಲ್ಲಿ ತೆರಿಗೆ ವಸೂಲಾತಿಯ ವಿಶೇಷ ಅಭಿಯಾನದ ಫಲವಾಗಿ ೬೦ ಗ್ರಾಮ ಪಂಚಾಯತ್‌ಗಳು ಪ್ರಸಕ್ತ ಶೇಕಡ ೧೦೦ ರಷ್ಟು ಸಾಧನೆ ಮಾಡಿ ಗದಗ ಜಿಲ್ಲೆ, ರಾಜ್ಯದಲ್ಲಿ ೭ ಸ್ಥಾನದಲ್ಲಿದೆ ಎಂದು ಜಿಲ್ಲಾ ಪಂಚಾಯತ ಸಿ.ಇ.ಒ ಭರತ್ ಎಸ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

೩. ಪೌರಾಡಳಿತ ನಿರ್ದೇಶನಾಲಯ ೨೦೨೫-೨೦೨೬ನೇ ಸಾಲಿನ ಮಾರುಕಟ್ಟೆ ದರದ ಮಾರ್ಗಸೂಚಿ ಆಧರಿಸಿ, ನಿಯಮಾನುಸಾರ ಚಿತ್ರದುರ್ಗದ ಹಿರಿಯೂರು ನಗರಸಭೆಯು ವ್ಯಾಪ್ತಿಯ ಆಸ್ತಿ ತೆರಿಗೆ ದರವನ್ನು ಪರಿಷ್ಕರಿಸಿ ಆದೇಶ ಹೊರಡಿಸಿದೆ.

೪. ಸಾಹಿತಿ, ವಿಮರ್ಶಕ, ನಿವೃತ್ತ ಪ್ರಾಧ್ಯಾಪಕರು, ಬಿಎಂಶ್ರೀ ಪ್ರತಿಷ್ಠಾನದ ಗೌರವ ಅಧ್ಯಕ್ಷರಾದ ಡಾ.ಪಿ.ವಿ.ನಾರಾಯಣ ನಿಧನ ಹೊಂದಿದ್ದಾರೆ. ಅವರ ನಿಧನಕ್ಕೆ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಸೇರಿದಂತೆ ಹಲವು ಗಣ್ಯರು ಸಂತಾಪ ಸೂಚಿಸಿದ್ದಾರೆ.

೫. ಬೆಂಗಳೂರು-ಮೈಸೂರು ಹೆದ್ದಾರಿಯಲ್ಲಿಂದು ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮದ ಐರಾವತ್ ಬಸ್ ಗೆ ಕಾರು ಡಿಕ್ಕಿ ಹೊಡೆದ ಪರಿಣಾಮ ನಾಲ್ವರು ಸ್ಥಳದಲ್ಲೇ ಸಾವನ್ನಪ್ಪಿದ್ದಾರೆ. ಮಂಡ್ಯ ನಗರಕ್ಕೆ ಸಮೀಪವಿರುವ ತೂಬಿನಕೆರೆ ಗ್ರಾಮದ ಬಳಿಯ ಹೆದ್ದಾರಿ ನಿರ್ಗಮನದಲ್ಲಿ ಈ ಅಪಘಾತ ಸಂಭವಿಸಿದೆ.

*********ಮುಕ್ತಾಯ********